**ಕರ್ನಾಟಕ ಸರ್ಕಾರದ ನಡವಳಿಗಳು**

ವಿಷಯ: ಜಿಲ್ಲಾ ಪಂಚಾಯತ್ ಅಧ್ಯಕ್ಷರುಗಳಿಗೆ ಹೊಸ ವಾಹನ ಖರೀದಿಸಲು ಅನುಮತಿ ನೀಡುವ ಬಗ್ಗೆ.

ಓದಲಾಗಿದೆ: ಸರ್ಕಾರದ ಆದೇಶ ಸಂ. ಗ್ರಾಅಪ 75 ಜಿಪಸ 2016 (ಪಿ-1) ದಿನಾಂಕ 21.7.2016

:-:

**ಪ್ರಸ್ತಾವನೆ:**

ರಾಜ್ಯದ ಎಲ್ಲಾ ಜಿಲ್ಲಾ ಪಂಚಾಯತ್‌ಗಳಿಗೆ ಚುನಾವಣೆಗಳ ನಂತರ ಅಧ್ಯಕ್ಷರುಗಳು ಆಯ್ಕೆಯಾಗಿರುತ್ತಾರೆ. ಜಿಲ್ಲಾ ಪಂಚಾಯತ್ ಅಧ್ಯಕ್ಷರುಗಳಿಗೆ ರಾಜ್ಯ ಸಚಿವರ ಸ್ಥಾನಮಾನವನ್ನು ನೀಡಲಾಗಿದ್ದು, ಮೇಲೆ ಓದಲಾದ ದಿನಾಂಕ 21.7.2016 ರ ಸರ್ಕಾರಿ ಆದೇಶದಲ್ಲಿ ಅವರುಗಳಿಗೆ ರೂ. 11.00 ಲಕ್ಷಗಳ ಆರ್ಥಿಕ ಮಿತಿಯೊಳಗೆ ಈಗಾಗಲೇ ನೀಡಲಾಗಿರುವ ವಾಹನವನ್ನು ಹಿಂಪಡೆಯುವ ಷರತ್ತಿಗೊಳಪಟ್ಟು ಹೊಸ ವಾಹನವನ್ನು ಸಂಬಂಧಪಟ್ಟ ಜಿಲ್ಲಾ ಪಂಚಾಯತ್‌ನಿಂದ ಆರ್ಥಿಕ ಇಲಾಖೆಯ ಸಹಮತಿಯೊಂದಿಗೆ ಖರೀದಿಸಲು ಅವಕಾಶ ಕಲ್ಪಿಸಲಾಗಿದೆ. ಆದ್ದರಿಂದ ಈ ಕೆಳಕಂಡ ಆದೇಶ.

**ಸರ್ಕಾರಿ ಆದೇಶ ಸಂಖ್ಯೆ: ಗ್ರಾಅಪ 149 ಕೆಎಸ್‌ಎಸ್ 2016 ಬೆಂಗಳೂರು ದಿನಾಂಕ:24.9.2016**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ ರಾಜ್ಯದ ಎಲ್ಲಾ ಜಿಲ್ಲಾ ಪಂಚಾಯತ್ ಅಧ್ಯಕ್ಷರುಗಳಿಗೆ ಆಯಾಯ ಜಿಲ್ಲಾ ಪಂಚಾಯತ್‌ಗಳಲ್ಲಿ ಲಭ್ಯವಿರುವ ಅನುದಾನದಲ್ಲಿ ರೂ. 11.00 ಲಕ್ಷಗಳ (ಹನ್ನೊಂದು ಲಕ್ಷ ರೂಪಾಯಿಗಳು) ಆರ್ಥಿಕ ಮಿತಿಯೊಳಗೆ ಈಗಾಗಲೇ ನೀಡಲಾಗಿರುವ ವಾಹನವನ್ನು ಹಿಂಪಡೆದು ಹೊಸ ವಾಹನವನ್ನು ಖರೀದಿಸಲು ಮಂಜೂರಾತಿ ನೀಡಿದೆ ಹಾಗೂ ಸದರಿ ಹೊಸ ವಾಹನ ಖರೀದಿಸಲು ಕರ್ನಾಟಕ ಸಾರ್ವಜನಿಕ ಸಂಗ್ರಹಣೆಗಳಲ್ಲಿ ಪಾರದರ್ಶಕತೆ ಅಧಿನಿಯಮ ಹಾಗೂ ಅದರಡಿ ರಚಿಸಿರುವ ನಿಯಮಗಳನ್ನು ಪಾಲಿಸತಕ್ಕದ್ದು.

ಈ ಆದೇಶವನ್ನು ಆರ್ಥಿಕ ಇಲಾಖೆಯು ಟಿಪ್ಪಣಿ ಸಂಖ್ಯೆ: ಆಇ 307 ವೆಚ್ಚ-6/2016 ದಿನಾಂಕ 21.9.2016 ರಲ್ಲಿ ನೀಡಿರುವ ಸಹಮತಿಯನ್ವಯ ಹೊರಡಿಸಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

24/9/2016

(ಎಸ್.ರಂಗನಗೌಡ)
ಸರ್ಕಾರದ ಅಧೀನ ಕಾರ್ಯದರ್ಶಿ (ಸೇವೆಗಳು ಬಿ & ಸಿ)
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.

ಗೆ:

1. ಮಹಾಲೇಖಪಾಲರು, ಕರ್ನಾಟಕ, ಬೆಂಗಳೂರು.
2. ಎಲ್ಲಾ ಜಿಲ್ಲಾ ಪಂಚಾಯತ್‌ಗಳ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳಿಗೆ
3. ಎಲ್ಲಾ ಜಿಲ್ಲಾ ಖಜಾನಾಧಿಕಾರಿಗಳಿಗೆ
4. ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಸಚಿವರ ಆಪ್ತ ಕಾರ್ಯದರ್ಶಿಗಳು
5. ಸರ್ಕಾರದ ಪ್ರಧಾನ ಕಾರ್ಯದರ್ಶಿ, ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ ಇವರ ಆಪ್ತ ಕಾರ್ಯದರ್ಶಿಗಳು
6. ಜಂಟಿ ಕಾರ್ಯದರ್ಶಿ (ಆಡಳಿತ), ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ಇವರ ಆಪ್ತ ಸಹಾಯಕರು.
7. ಶಾಖಾ ರಕ್ಷಕ ಕಡತ: ಹೆಚ್ಚಿನ ಪ್ರತಿ